<u>ಕರ್ನಾಟಕ ವಿಧಾನ ಪರಿಷತ್ತು</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	11(101)
ಮಾನ್ಯ ಸದಸ್ಯರ ಹೆಸರು	:	ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ	:	21.09.2020
ಉತ್ತರಿಸುವ ಸಚಿವರ	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಕೊರೋನ ಲಾಕ್‌ಡೌನ್‌ನಿಂದ ಅನುದಾನ ರಹಿತ ಶಾಲೆಗಳ 2 ಲಕ್ಷಕ್ಕೂ ಹೆಚ್ಚು ಶಿಕ್ಷಕರು ಕೆಲಸ ಮತ್ತು ವೇತನವಿಲ್ಲದೆ ಕಳೆದ ಆರು ತಿಂಗಳಿಂದ ಸಂಕಷ್ಟಕ್ಕೆ ಸಿಲುಕಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಂದಿದೆ.</td></tr>
<tr><td>ಆ</td><td>ಹಾಗಿದ್ದಲ್ಲಿ, ಕೊರೋನ ಲಾಕ್‌ಡೌನ್ ಅವಧಿಯನ್ನು ಸೇವೆ ಎಂದು ಪರಿಗಣಿಸಿ ಅತಿಥಿ ಉಪನ್ಯಾಸಕರು ಹಾಗೂ ಅನುದಾನ ರಹಿತ ಶಾಲೆಗಳಲ್ಲಿ ಕೆಲಸ ಮಾಡುತ್ತಿರುವ ಶಿಕ್ಷಕರಿಗೆ ವಿಶೇಷ ಪ್ಯಾಕೇಜ್ ಮೂಲಕ ಧನ ಸಹಾಯ ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು;</td><td rowspan="2">ಅತಿಥಿ ಶಿಕ್ಷಕರು ತಾತ್ಕಾಲಿಕವಾಗಿ 10 ತಿಂಗಳ ಶಾಲೆಗಳು ಶಾಲೆ ನಿರ್ವಹಿಸುವ ನಿರ್ದಿಷ್ಟ ಅವಧಿಗೆ ಆಯ್ಕೆಯಾಗಿ ಗೌರವ ಸಂಭಾವನೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಾಗಿರುತ್ತಾರೆ. ಅತಿಥಿ ಶಿಕ್ಷಕರುಗಳು ವಾಸ್ತವವಾಗಿ ಕಾರ್ಯನಿರ್ವಹಿಸಿದ ದಿನಗಳನ್ನು ಪರಿಗಣಿಸಿ ಸಂಭಾವನೆಯನ್ನು ಪಾವತಿಸಲಾಗುತ್ತದೆ. ಕಾರ್ಯನಿರ್ವಹಿಸದ ಅವಧಿಗೆ ಸಂಭಾವನೆ ನೀಡಲು ಅವಕಾಶವಿರುವುದಿಲ್ಲ. ಸಂಪನ್ಮೂಲಗಳ ಕೊರತೆಯಿಂದಾಗಿ ವಿಶೇಷ ಪ್ಯಾಕೇಜ್ ನೀಡಲು ಸಾಧ್ಯವಾಗುತ್ತಿಲ್ಲ.
<u>ಅನುದಾನರಹಿತ ಶಾಲಾ ಸಿಬ್ಬಂದಿಗಳು:</u>
ಅನುದಾನರಹಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅನುದಾನರಹಿತ ಶಿಕ್ಷಕರ ವೇತನ ಮತ್ತು ಇತರೆ ಸೇವಾ ಸೌಲಭ್ಯಗಳನ್ನು ಆಯಾ ಆಡಳಿತ ಮಂಡಳಿಗಳೆ ಭರಿಸಬೇಕಾಗುವುದರಿಂದ ವಿಶೇಷ ಪ್ಯಾಕೇಜ್ ಮಂಜೂರಾತಿ ಪ್ರಶ್ನೆ ಉದ್ಭವಿಸುವುದಿಲ್ಲ. ಇದಕ್ಕೆ ಅನುಕೂಲ ಮಾಡುವ ದೃಷ್ಟಿಯಿಂದ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಮಾಡಿಕೊಳ್ಳಲು ಹಾಗೂ ಮೊದಲ ಅವಧಿಯ ಶುಲ್ಕಗಳನ್ನು ಸಂಗ್ರಹಿಸಲು ಅವಕಾಶ ಕಲ್ಪಿಸಿಕೊಡಲಾಗಿದೆ.</td></tr>
<tr><td>ಇ</td><td>ಈಗಲಾದರೂ ಸರ್ಕಾರ ಅನುದಾನ ರಹಿತ ಶಾಲೆಗಳ ನೌಕರರ ಮನವಿಯನ್ನು ಪರಿಗಣಿಸಿ ವಿಶೇಷ ಪ್ಯಾಕೇಜ್ ಮಂಜೂರು ಮಾಡಲು ಕ್ರಮ ಕೈಗೊಳ್ಳುವುದೇ?</td></tr>
</table>

ಸಂ:ಇಪಿ265ಎಸ್‌ಇಎಸ್2020

(ಎಸ್ ಸುರೇಶ್ ಕುಮಾರ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ

ಹಾಗೂ ಸಕಾಲ ಸಚಿವರು